1. ಕಳೆದ ಬಜೆಟ್ ಅಧಿವೇಶನದಲ್ಲಿ ಎಲ್ಲಾ ಸ್ವಾತಂತ್ರ ಹೋರಾಟಗಾರರಿಗೂ ಗೌರವಧನ ಹೆಚ್ಚಿಸುವ ಬಗ್ಗೆ ಪ್ರಸ್ತಾಪ ಮಾಡಿರುವುದು ನಿಜವಲ್ಲವೇ:

2. ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಜೆ. ಹೆಚ್. ಪಟೀಲ್ (ಮುಖ್ಯ ಮಂತ್ರಿಗಳು) :

1. ಹೌದು

2. ಸರ್ಕಾರವು ಈಗಾಗಲೇ ಸ್ವಾತಂತ್ರ್ಯ ಹೋರಾಟಗಾರರ ಗೌರವ ಧನವನ್ನು ದಿನಾಂಕ 15-8-97 ರಿಂದ ಜಾರಿಗೆ ಬರುವಂತೆ ಮಾಸಿಕ ರೂ. 500 ರಿಂದ 750 ರೂ. ಗಳಿಗೆ ಹೆಚ್ಚಿಸಿ ಆದೇಶ ಹೊರಡಿಸಿದೆ.

ಮೊಳಕಾಲ್ಮೂರು ತಾಲ್ಲೂಕಿನಲ್ಲಿರುವ ನ್ಯಾಯಬೆಲೆ ಅಂಗಡಿಗಳು

288 (553)

ಶ್ರೀ ಎನ್. ವೈ. ಗೋಪಾಲಕೃಷ್ಣ (ಮೊಳಕಾಲ್ಮೂರು) : ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ಮೊಳಕಾಲ್ಮೂರು ತಾಲ್ಲೂಕಿನಲ್ಲಿರುವ ಒಟ್ಟು ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು?

ಆ) ಈ ತಾಲ್ಲೂಕಿನಲ್ಲಿರುವ ಒಟ್ಟು ಪಡಿತರ ಚೀಟಿಗಳು ಹಾಗೂ ಹಸಿರು ಕಾರ್ಡುಗಳ ಸಂಖ್ಯೆ ಎಷ್ಟು?

ಇ) ಈ ತಾಲ್ಲೂಕಿನ ಪ್ರತಿಯೊಂದು ಹಳ್ಳಿಗಳಲ್ಲೂ ನ್ಯಾಯಬೆಲೆ ಅಂಗಡಿಗಳನ್ನು ತೆರೆಯಲಾಗಿದೆಯೇ?

ಈ) ನ್ಯಾಯಬೆಲೆ ಅಂಗಡಿಗಳಿಲಬಂದು ಪಡಿತರ ಪದಾರ್ಥಗಳನ್ನು ವಿತರಿಸಲು ಸರ್ಕಾರವು ಕ್ರಮ ಕೈಗೊಳ್ಳಲಾಗುತ್ತದೆಯೆ?

ಶ್ರೀ ಜಿ. ಬಸವಣ್ಣಪ್ಪ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು) :

ಅ) 28- 12- 1998ರ ಅಂತ್ಯಕ್ಕೆ ಒಟ್ಟು 45 ನ್ಯಾಯಬೆಲೆ ಅಂಗಡಿಗಳಿರುತ್ತವೆ.

ಆ) ದಿನಾಂಕ : 28- 12- 1998 ರ ಅಂತ್ಯಕ್ಕೆ

ಹಸಿರು ಕಾರ್ಡುಗಳು	18939
ಕೇಸರಿ ಕಾರ್ಡುಗಳು	2383
ಒಟ್ಟು	21372

ಕಾರ್ಡುಗಳನ್ನು ಮೊಳಕಾಲ್ಮೂರು ತಾಲ್ಲೂಕಿನಲ್ಲಿ ವಿತರಿಸಲಾಗಿದೆ.

ಇ) ಇಲ್ಲ

ಈ) ವ್ಯವಹಾರಿಕವಾಗಿ ಸಲಹೆಯನ್ನು ಜಾರಿಗೊಳಿಸುವುದು ಕಷ್ಟ.